ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟೆಂಬರ್, 2020

ಕಲಾವಿದರಿಗೆ ಪ್ರೋತ್ಸಾಹಧನದ ಬಗ್ಗೆ

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ):-

721 (780) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ವಿವಿಧ ಭಾಗಗಳಲ್ಲಿನ ಕಲಾತಂಡಗಳನ್ನು ಮತ್ತು ಕಲಾವಿದರನ್ನು ಗುರುತಿಸಿ, ಅವರುಗಳನ್ನು ಪ್ರೋತ್ಸಾಯಿಸುವ ಕಾರ್ಯಗಳು ಸರ್ಕಾರದ ಮಟ್ಟದಲ್ಲಿ ನಡೆಯುತ್ತಿದೆಯೇ ;

(ಆ) ಹಾಗಿದ್ದಲ್ಲಿ, ಇನ್ನೂ ಬೆಳಕಿಗೆ ಬಾರದ ಹಲವಾರು ಪ್ರತಿಭಾ ಕಲಾ ತಂಡಗಳೂ ಅವಕಾಶ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಕಲಾವಿದರನ್ನು ಪ್ರೋತ್ಸಾಯಿಸಿ ಅವರುಗಳನ್ನು ಮುಖ್ಯ ವೇದಿಕೆಗೆ ಕರೆತರುವ ಜವಾಬ್ದಾರಿಯನ್ನು ಇಲಾಖಾಧಿಕಾರಿಗಳು ಮಾಡುವಲ್ಲಿ ಸಫಲರಾಗಿದ್ದಾರೆಯೇ ; ಹಾಗಿದ್ದಲ್ಲಿ, ರಾಜ್ಯದ ವಿವಿಧ ಭಾಗಗಳಲ್ಲಿನ ಕಲಾವಿದರುಗಳು ಅವಕಾಶ ವಂಚಿತರಾಗಿದ್ದು ಏತಕ್ಕಾಗಿ;

(ಈ) ಇವರಗಳನ್ನು ಬೆಳೆಸುವಂತ ಹಾಗೂ ಪ್ರೋತ್ಸಾಹಿಸುವ ಸಲುವಾಗಿ ಅವರಿಗೆ ಭವಿಷ್ಯಕ್ಕೆ ಅನುಗುಣವಾಗಿ ಭದ್ರತೆಯನ್ನು ನೀಡಲಾಗಿದೆಯೇ; ಹಾಗಿದ್ದಲ್ಲಿ, ಯಾವ ರೀತಿಯ ಭದ್ರತೆಯನ್ನು ನೀಡಲಾಗಿದೆ ; ಸರ್ಕಾರವು ಈ ಬಗ್ಗೆ ಕೈಗೊಂಡ ಕ್ರಮಗಳೇನು;

(ಉ) ಇಲಾಖೆಯ ವತಿಯಿಂದ ನಡೆದ ಕಾರ್ಯಕ್ರಗಳು ಆಯಾ ಜಿಲ್ಲೆಗಳಲ್ಲಿ ಸೂಕ್ತವಾದ ಸಮಯದಲ್ಲಿ ಜರುಗಲಿದೆಯೇ ; ಹಾಗಿದ್ದಲ್ಲಿ, ಇನ್ನೂ ಅನೇಕ ಭಾಗಗಳಲ್ಲಿ ಇಲಾಖಾ ವತಿಯಿಂದ ಕೈಗೊಳ್ಳುವ ಕಾರ್ಯಕ್ರಮಗಳು, ಯೋಜನೆಗಳು ಜನಸಾಮಾನ್ಯರನ್ನು ಮುಟ್ಟಿವೆಯೇ ; ಮುಟ್ಟಿಸುವಲ್ಲಿ ಸರ್ಕಾರವು ಕೈಗೊಂಡ ದಿಟ್ಟ ನಿರ್ಧಾರಗಳೇನು ?